**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**

**ಸಿಸಿ ನಂಬರ್ 2192/2024**

**ಸಿ ಡಬ್ಲೂ -3**
**ಪಿ ಡಬ್ಲೂ -1**

**ಸಾಕ್ಷಿಯ ಹೆಸರು -** **ತಳವಾರ ಸ್ವಾಮಿ**
**ತಾಯಿಯ ಹೆಸರು -** **ಸಣ್ಣ ನಿಂಗವ್ವ**
**ವಯಸ್ಸು -** 40 **ವರ್ಷಗಳು**
**ಉದ್ಯೋಗ -** **ವ್ಯವಸಾಯ**
**ವಾಸಸ್ಥಳ -** **ಹೊಸಪೇಟೆ**

**ಸಾಕ್ಷಿಯನ್ನು ದಿನಾಂಕಃ 31.01.2026 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಹೆಬೆಟ್ಟಿನ ಗುರುತು ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಪಂಚನಾಮೆ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ನಿಪಿಃ 1 ಎಂದು ಗುರುತಿಸಲಾಯಿತು.

ಸದರಿ ದಾಖಲೆಗೆ ಈಗ್ಗೆ 2 ವರ್ಷಗಳ ಹಿಂದೆ ಪೋಲಿಸ್ ಠಾಣೆಯಲ್ಲಿ ಹೆಬ್ಬೆಟ್ಟಿನ ಗುರುತು ಹಾಕಿದ್ದೆ. ನಿಪಿಃ 1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ. ಈಗ ನಾನು ನೋಡುತ್ತಿರುವ 4 ಪೋಟೋಗಳಲ್ಲಿನ ವ್ಯಕ್ತಿ ನಾನೇ ಇರುತ್ತೇನೆ. ಸದರಿ ಪೋಟೋಗಳನ್ನು ಒಟ್ಟಾಗಿ ನಿಪಿಃ 2 ಎಂದು ಗುರುತಿಸಲಾಯಿತು. ನಿಪಿಃ 2 ರ ಪೋಟೋವನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**CC 2192/2024**

**<u>ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ</u>**

ದಿಃ 16.03.2024 ರಂದು ಮದ್ಯಹ್ನ 12.30 ಕ್ಕೆ ಹೊಸಪೇಟೆಯ 3 ಅಂಗಡಿ ವೃತ್ತಕ್ಕೆ ನನ್ನನ್ನು ಮತ್ತು ಚಾಸಾ 2 ರವರನ್ನು ಕರೆಯಿಸಿ ಪಿ ಎಸ್ ಐ ನವರು ಈ ಪ್ರಕರಣದ ದಾಳಿಯ ಬಗ್ಗೆ ಮಾಹಿತಿ ನೀಡಿದ್ದರು ಎಂದರೆ ಸರಿಯಲ್ಲ. ನಮ್ಮನ್ನು ಸೋಗೆ ಮಾರುಕಟ್ಟೆ ಹತ್ತಿರ ಕರೆದುಕೊಂಡು ಹೋದಾಗ ಪ್ರಕರಣದ ಆರೋಪಿತರು ಮಟಕ ಜೂಜಾಟ ಆಡುತ್ತಿರುವುದು ಕಂಡುಬಂದಿತು ಎಂದರೆ ಸರಿಯಲ್ಲ, ಆರೋಪಿತರ ಬಳಿ ರೂ.4150, ಮಟಕ ಪಟ್ಟಿ ಮತ್ತು ಒಂದು ಬಾಲ್ ಪೆನ್ನು ದೊರೆತವು ಎಂದರೆ ಸರಿಯಲ್ಲ. ಸದರಿ ಮು.ಮ ಗಳನ್ನು ನನ್ನ ಮತ್ತು ಚಾಸಾ 2 ರವರ ಸಮಕ್ಷಮ ನಿಪಿ 1 ರಂತೆ ಪಂಚನಾಮೆ ಕ್ರಮ ಜರುಗಿಸಿ ಜಪ್ತು ಪಡಿಸಲಾಯಿತು ಎಂದರೆ ಸರಿಯಲ್ಲ.

ನನ್ನ ಸಮಕ್ಷಮ ಪಂಚನಾಮೆ ಆಗಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆ ಎಂದರೆ ಸರಿಯಲ್ಲ.

<u>**ಪಾಟೀ ಸವಾಲು ಆರೋಪಿ ಪರ ಶ್ರೀ ಬಿ ಎಂ ವಕೀಲರಿಂದಃ** ಇಲ್ಲಾ.</u>

ಮರುವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.